ನಿರ್ಣಯವು ಸರ್ವಾನುಮತದಿಂದ ಅಂಗೀಕರಿಸಲ್ಪಟ್ಟಿತು.

(ಗೊಂದಲ)

ಶ್ರೀ ಜಗದೀಶ್ ಶೆಟ್ಟರ್:- ಐದು ಕೋಟಿ ಜನರ ಪ್ರಶ್ನೆ ಇಲ್ಲಿದೆ. ಸಾವಿರಾರು ಕೋಟಿ ರೂಪಾಯಿ ಲೂಟಿ ಆಗುತ್ತಿದೆ. ನಿಮ್ಮವರಿಗೆ ರಕ್ಷಣೆ ಸಿಗುತ್ತಿದೆ. ಇನ್‌ವೆಸ್ಟಿಗೇಷನ್ ಮಾಡುವುದಕ್ಕೆ ಸರ್ಕಾರ ಸಿದ್ಧ ಇಲ್ಲ.

(ಗೊಂದಲ)

ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ:

ಶ್ರೀ ಡಿ.ಬಿ.ಚಂದ್ರೇಗೌಡ(ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು):- ಮಾನ್ಯ ಅಧ್ಯಕ್ಷರೇ, ''ಜನವರಿ ೨೧, ೨೦೦೨ರಂದು ವಿಧಾನ ಮಂಡಲದ ಸದಸ್ಯರನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಸಭೆಯ ಸದಸ್ಯರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾ ಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ''

(ಗೊಂದಲ)

(ಈ ಹಂತದಲ್ಲಿ ಜನತಾ ದಳ(ಸಂ) ಹಾಗೂ ಜನತಾ ದಳ(ಎಸ್) ಸದಸ್ಯರುಗಳು ಸಭಾತ್ಯಾಗ ಮಾಡಿದರು)

ಅಧ್ಯಕ್ಷರು:- ''ಜನವರಿ ೨೧, ೨೦೦೨ರಂದು ವಿಧಾನ ಮಂಡಲದ ಸದಸ್ಯರನ್ನುದ್ದೇಶಿಸಿ ದಯ ಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಸಭೆಯ ಸದಸ್ಯರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾ ಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುವುದು''

ವಂದನಾ ನಿರ್ಣಯ ಸರ್ವಾನುಮತದಿಂದ ಅಂಗೀಕರಿಸಲ್ಪಟ್ಟಿತು.

(ಗೊಂದಲ)

ಅಧ್ಯಕ್ಷರು: ಸದನವು ಸರ್ವಾನುಮತದಿಂದ ಅಂಗೀಕರಿಸಿದ ಈ ವಂದನಾ ನಿರ್ಣಯವನ್ನು ಸನ್ಮಾನ್ಯ ರಾಜ್ಯಪಾಲರಿಗೆ ಕಳುಹಿಸಿಕೊಡಲಾಗುವುದು.

ಶ್ರೀ ಮಲ್ಲಿಕಾರ್ಜುನ್ ಖರ್ಗೆ(ಗೃಹ ಸಚಿವರು):- ತಾವು ಇವು ಎರಡನ್ನೂ ಪಾಸ್ ಮಾಡಿಸಿ ಕೊಟ್ಟಿದ್ದಕ್ಕಾಗಿ ತಮಗೆ ಹಾರ್ದಿಕವಾದಂಥ ಅಭಿನಂದನೆಗಳನ್ನು ಸಲ್ಲಿಸುತ್ತೇನೆ.

ಅಧ್ಯಕ್ಷರು:- ಈ ಸದನವನ್ನು ನಡೆಸುವುದಕ್ಕೆ ನಾವು ಸುಮಾರು ೩-೪ ದಿವಸದಿಂದ ಪ್ರಯತ್ನ ಪಟ್ಟಿದ್ದೇವೆ. ಆಗುತ್ತಾ ಇಲ್ಲ. ನಾನೇನೂ ಮಾಡುವುದಕ್ಕೆ ಆಗುವುದಿಲ್ಲ. ಆದ್ದರಿಂದ ಈಗ ಸದನವನ್ನು ಅನಿರ್ದಿಷ್ಟ ಕಾಲಕ್ಕೆ ಮುಂದೂಡುತ್ತಿದ್ದೇನೆ.

(ಸದನವು ೧೨.೨೫ಕ್ಕೆ ಅನಿರ್ದಿಷ್ಟ ಅವಧಿಯವರೆಗೆ ಮುಂದೂಡಲ್ಪಟ್ಟಿತು.)